# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ 2ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**
1) ದಿನಾಂಕ: 12-07-2013ರ ಪರಿಷ್ಕೃತ ಆಯವ್ಯಯ.
2) ಸರ್ಕಾರಿ ಆದೇಶ ಸಂಖ್ಯೆ: ಕೃಇ 16 ಕೃವಿಧಾ 2013, ದಿನಾಂಕ: 28-05-2013.
3) ಪ್ರಭಾರ ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಇವರ ದಿನಾಂಕ: 02-08-2013ರ ಪತ್ರ ಸಂಖ್ಯೆ: ಕುಪ/ಹನಿ/ /2013-14.

**** *** ****

**ಪ್ರಸ್ತಾವನೆ:-**

2013-14ನೇ ಸಾಲಿನ ಆಯವ್ಯಯದಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಅನುದಾನ ರೂ. 7000.00 ಲಕ್ಷಗಳನ್ನು ನಿಗಧಿಪಡಿಸಿದ್ದು, ಅದರಂತೆ ಮೇಲೆ (2)ರಲ್ಲಿ ಓದಲಾದ ದಿನಾಂಕ: 28-05-2013ರ ಆದೇಶದಲ್ಲಿ ಯೋಜನೇತರ ವೆಚ್ಚಕ್ಕಾಗಿ ರೂ. 1750.00 ಲಕ್ಷಗಳನ್ನು (ರೂ. ಒಂದು ಸಾವಿರದ ಏಳು ನೂರ ಐವತ್ತು ಲಕ್ಷಗಳು ಮಾತ್ರ) ಬಿಡುಗಡೆ ಮಾಡಲಾಗಿದೆ.

ದಿನಾಂಕ: 12-07-2013ರಂದು ಮಾನ್ಯ ಮುಖ್ಯ ಮಂತ್ರಿಯವರು 2013-14ನೇ ಸಾಲಿಗೆ ಹೊಸ ಆಯವ್ಯಯ ಭಾಷಣವನ್ನು ಮಂಡಿಸಿರುತ್ತಾರೆ. ಅದರಂತೆ ಮೇಲೆ ಓದಲಾದ-1ರಲ್ಲಿ, ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಅನುದಾನವನ್ನು ಪರಿಷ್ಕರಿಸಿ ರೂ. 5573.00 ಲಕ್ಷಗಳನ್ನು ನಿಗಧಿಪಡಿಸಿದೆ.

ವಿಶ್ವವಿದ್ಯಾಲಯದ ನೌಕರರಿಗೆ ವೇತನ ಹಾಗೂ ವೇತನ ಸಂಬಂಧಿ, ಪಿಂಚಣಿ ಅಂಶದಾನ ಹಾಗೂ ಇತರ ಸಾದಿಲ್ವಾರು ವೆಚ್ಚಗಳಿಗಾಗಿ ಪ್ರತಿ ತಿಂಗಳು ಕನಿಷ್ಟು ರೂ. 700.00 ಲಕ್ಷಗಳ ಅವಶ್ಯಕತೆ ಇರುವುದರಿಂದ, ಈ ಮೊದಲು ನಿಗದಿ ಮಾಡಿದ ತ್ರೈಮಾಸಿಕ ಅನುದಾನ ರೂ. 1750.00 ಲಕ್ಷಗಳನ್ನು 2ನೇ ತ್ರೈಮಾಸಿಕ ಅನುದಾನವನ್ನಾಗಿ ನೀಡಿದಲ್ಲಿ ಮಾತ್ರ ಜುಲೈ 2013ರಿಂದ ಸೆಪ್ಟೆಂಬರ್ 2013ರವರೆಗೆ ವೇತನ ಹಾಗೂ ವೇತನ ಸಂಬಂಧಿ ವೆಚ್ಚಗಳು ಹಾಗೂ ಪಿಂಚಣಿ ಅಂಶದಾನ ಮತ್ತು ಸಾದಿಲ್ವಾರು ವೆಚ್ಚಗಳನ್ನು ನೀಡಲು ಸಾಧ್ಯವಾಗುತ್ತದೆ. ಆದುದರಿಂದ, ಈಗ ನಿಗದಿಯಾದ ರೂ. 5573.00 ಲಕ್ಷಗಳ ಪರಿಷ್ಕೃತ ಅನುದಾನದಲ್ಲಿ 2ನೇ ತ್ರೈಮಾಸಿಕ ಅನುದಾನ ರೂ. 1750.00 ಲಕ್ಷಗಳನ್ನು ನಿಗದಿಪಡಿಸಿ

....2

ಬಿಡುಗಡೆ ಮಾಡುವಂತೆ ಮೇಲೆ(3)ರಲ್ಲಿ ಓದಲಾದ ದಿನಾಂಕ: 02-08-2013ರ ಪತ್ರದಲ್ಲಿ ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಕೃಷಿ ವಿಶ್ವವಿದ್ಯಾಲಯ ಧಾರವಾಡಕ್ಕೆ 2013-14ನೇ ಸಾಲಿಗೆ ನಿಗದಿಯಾಗಿರುವ ಯೋಜನೇತರ ಅನುದಾನ ರೂ. 5573.00 ಲಕ್ಷಗಳಲ್ಲಿ ಪ್ರತಿ ತ್ರೈಮಾಸಿಕ ಅವಧಿಗೆ 25%ರಷ್ಟು ಅನುದಾನ ರೂ. 1393.25 ಲಕ್ಷಗಳನ್ನು ಬಿಡುಗಡೆ ಮಾಡಬೇಕಿದ್ದು, ಆದರೆ ಈ ಹಿಂದೆ ಬಿಡುಗಡೆ ಮಾಡಲಾದ ಪ್ರಥಮ ಕಂತಿನ ಅನುದಾನವನ್ನು ಹೆಚ್ಚಿಗೆ ನೀಡಿರುವುದರಿಂದ ರೂ. 1393.25 ಲಕ್ಷಗಳಿಗೆ ಮಾತ್ರ ಸೀಮಿತಗೊಳಿಸಿ, ಈ ಹಿಂದೆ ಬಿಡುಗಡೆ ಮಾಡಲಾದ ಪ್ರಥಮ ತ್ರೈಮಾಸಿಕ ಅನುದಾನ ರೂ. 1750.00ಗಳಲ್ಲಿ ರೂ. 356.75 ಲಕ್ಷಗಳನ್ನು ಹೊಂದಾಣಿಕೆ ಮಾಡಿ ಉಳಿದಂತೆ ರೂ. 1036.50 ಲಕ್ಷಗಳನ್ನು ಬಿಡುಗಡೆ ಮಾಡಲು ಆಂತರಿಕ ಆರ್ಥಿಕ ಸಲಹೆಗಾರರು ಸಹಮತಿಸಿದ್ದಾರೆ. ಅದರಂತೆ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಕೃಇ 16 ಕೃವಿಧಾ 2013, ಬೆಂಗಳೂರು, ದಿನಾಂಕ: 28-08-2013**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ ರೂ. 1036.50 ಲಕ್ಷಗಳನ್ನು (ರೂ. ಒಂದು ಸಾವಿರದ ಮೂವತ್ತಾರು ಲಕ್ಷ ಐವತ್ತು ಸಾವಿರಗಳು ಮಾತ್ರ) ಲೆಕ್ಕ ಶೀರ್ಷಿಕೆ-2415-80-004-2-01-101ರಡಿ 2ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ವೇತನ ಮತ್ತು ಇತರ ಭತ್ಯೆಗಳನ್ನು ಭರಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.
- ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.

...3

- ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.
- ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು Regional Joint Director of Collegiate Education, Dharwad, ಇವರಿಗೆ ನೀಡಲಾಗಿದೆ.

3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013, ದಿನಾಂಕ: 10-05-2013ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರ ಮತ್ತು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ: 17-08-2013ರ ಟಿಪ್ಪಣಿ ಸಂಖ್ಯೆ: ಕೃಇ 150 ಆಂಆಸ 2013ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ.ಆರ್. ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಕೃಷಿ ಇಲಾಖೆ

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

ಪ್ರತಿ:-

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಧಾರವಾಡ ಜಿಲ್ಲೆ, ಧಾರವಾಡ.
5. ಕುಲಸಚಿವರು/ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ.
6. ಕ್ಷೇತ್ರೀಯ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ.
7. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.